ಮೈಸೂರ ಗೆಜೆಟ್ಟ

ಸರ್ಕಾರದಿಂದ ಪ್ರಾಯಿಷ್ ಆದ್ದು.

ಬೆಂಗಳೂರು, ಶನಿವಾರ, ಅಕ್ಟೋಬರ್ ತಾ॥ 3, ಸ॥ 1885.

ಸೂಚನೆ ಈ ಭಾಗವನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

೨ನೇ ಭಾಗ.

ಇಂಡ್ಯಗವರ್ನ್‌ಮೆಂಟ್, ರೆಸಿಡೆಂಟರು, ಚೀಫ್ ಜಡ್ಜ್‌ರುಗಳ್ಗೆರೇರಿಂದ ಕೊಡೋಣಾದ ಇಸ್ತಿಹಾರ್ ನಾಮೆಗಳು.

ಫಿನಾನ್ಷಿಯಲ್ ಇಲಾಖೆ.

1882ನೇ ಇಸವಿಯ ಮೈಸೂರು ರೆಯಿಲ್‌ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡನ್‌ನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಗೆ, ಪರಾ ಬರೆಯಿಲ್ಪಡುವುದಾದಂತಾ ಸದರೀ ಕೂಲದ ಡಿಪೆಂಚರ್‌ಗಳ ಮೇಲೆ ಲಂಡನ್‌ನಲ್ಲಿ, ಸ್ಟ್ರಾಂಡ್ ಬೀದಿ 59ನೇ ನಂಬರ್ ಕಟ್ಟಡದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕಾಟ್ಸ್ ಅಂಡ್‌ಕೋ ಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಗೆ ಅವರುಗಳೊಡನೆ ಮೈಸೂರು ಗವರ್ನ್‌ಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡನ್‌ನಲ್ಲಿ ತಮ್ಮ ಡಿಪೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟವುಳ್ಳ ಜನಗಳು ತಮ್ಮ ಡಿಪೆಂಚರ್‌ಗಳನ್ನು ಎಷ್ಫೇಸ್‌ಮೆಂಟ್ ಯಾನೇ ಪರಾ ಬಗ್ಗೆ ಇದರಡಿ ರುಜು ಮಾಡಿರುವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡೀಯು, ಮದ್ರಾಸಿನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ಯೂಪ್ಲಿಕೇಟೂದ ಡಿವಾಂಡ್ ವಾರಂಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಷ್ಫೇಸ್‌ಮೆಂಟ್ ಬಗ್ಗೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಡಡ್ಲಿಸ್ಟ್,
ಕಾಂಪ್ಟ್ರೋಲರ್.

ಅಂಚೆ ಇಲಾಖೆ.

ತಾರೀಖು 1ನೇ ಅಕ್ಟೋಬರ್ 1885.

ಇದರಿಂದ ಸಕಲ ಜನಗಳಿಗೂ ತಿಳಿಯುವ ಬಗ್ಗೆ ಪ್ರಕಟಿಸಲ್ಪಡುವದೇನೆಂದರೆ, ಮೈಸೂರು ಮಹಾರಾಜ ರಾಜಾಸಾಹೆಬ್ ಬಹದೂರವರ ದಿವಾನರವರ ಅಪ್ಪಣೆ ಅನುಸರಿಸಿ ಈ ಕೆಳಗೆ ಕಂಡ ಸ್ಥಳಗಳೊಳಗೆ ಹೋಬಳಿ ಅಂಚೆ ಆಫೀಸುಗಳು ಸ್ಥಾಪಿಸಲ್ಪಟ್ಟಿರುತ್ತೆ.:—

ತಾಲ್ಲೂಕು.		ಅಂಚೆ ಆಫೀಸ್ ಸ್ಥಾಪಿಸಲ್ಪಟ್ಟ ಸ್ಥಳಗಳ ಹೆಸರು.
ಕುಣಿಗಲ್	..	ಯಲಿಯೂರು.
ತುಮಕೂರು	..	ಹೊನ್ನುಡಿಕೆ.
ಡಿಟೋ	..	ವೀರಪಗೆರೆ
ಡಿಟೋ	..	ಕೊಳಾಲ.

ಬಿ. ಮರಿಗಂಗಯ್ಯ, ಅಂಚೆ ಬಕಪಿ.